# ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ

ಸಂಖ್ಯೆ: ಬೆಂ.ಜ.ಮಂ/ಅ/ಅ.ಆ.ಶಾ/ 224 /2023–24 ದಿನಾಂಕ: 12/3/2024

## ನಿಷೇದಿತ ಆದೇಶ

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಕಾಯ್ದೆ–1964ರ ಕಲಂ 33 ಮತ್ತು 34 ರ ಅನುಸಾರ.

--***--

**ಪೀಠಿಕೆ:–**

ಬೆಂಗಳೂರು ಮಹಾನಗರದಲ್ಲಿ ಖಾಯಂ ವಾಸಿಗಳು ಹಾಗೂ ಬಂದು ಹೋಗುವವರನ್ನು ಸೇರಿಸಿ ಸುಮಾರು 1 ಕೋಟಿ 40 ಲಕ್ಷ ಜನಸಂಖ್ಯೆಯನ್ನು ಗುರುತಿಸಲಾಗಿದೆ. ಎಲ್ಲರಿಗೂ ಕುಡಿಯುವ ನೀರನ್ನು ಪೂರೈಕೆ ಮಾಡುವುದು ಅವಶ್ಯವಾಗಿರುತ್ತದೆ. ಪ್ರಸ್ತುತ ನಗರದಲ್ಲಿ ಪ್ರತಿದಿನ ಉಷ್ಣಾಂಶ ಏರುತ್ತಿದ್ದು, ಇತ್ತೀಚಿನ ದಿನಗಳಲ್ಲಿ ಮಳೆಯ ಕೊರತೆಯಿಂದ ಅಂತರ್ಜಲ ಕುಸಿದಿದ್ದು, ಬೆಂಗಳೂರು ನಗರದಲ್ಲಿ ನೀರನ್ನು ಪೋಲು ಮಾಡುವುದನ್ನು ತಡೆಗಟ್ಟಲು ಅವಶ್ಯವೆಂದು ಮನಗಂಡು ಕುಡಿಯುವ ನೀರನ್ನು ಸಾರ್ವಜನಿಕರು ಮಿತವಾಗಿ ಬಳಸುವಂತೆ ಅಗತ್ಯಪಡಿಸಲಾಗಿದೆ. ಈ ಹಿನ್ನಲೆಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ:–**

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಕಾಯ್ದೆ–1964ರ ಕಲಂ 33 ಮತ್ತು 34 ರ ಅನುಸಾರ ಬೆಂಗಳೂರು ನಗರದಲ್ಲಿ ಕುಡಿಯುವ ನೀರನ್ನು ಈಜು ಕೊಳ ಉದ್ದೇಶಗಳಿಗೆ ಬಳಸುವುದನ್ನು ಈ ಮೂಲಕ ನಿಷೇದಿಸಲಾಗಿದೆ.

ಮೇಲ್ಕಂಡ ನಿಷೇದ ಆದೇಶವನ್ನು ಉಲ್ಲಂಘನೆ ಮಾಡಿದಲ್ಲಿ, ಉಲ್ಲಂಘನೆ ಮಾಡುವವರ ವಿರುದ್ಧ ಜಲಮಂಡಳಿಯ ಕಾಯ್ದೆ 1964 ರ ಕಲಂ 109 ರಂತೆ ರೂ. 5000/– ಗಳ ದಂಡ ವಿಧಿಸಲಾಗುವುದು. ಈ ಉಲ್ಲಂಘನೆಯು ಮರುಕಳಿಸಿದಲ್ಲಿ ದಂಡ ಮೊತ್ತ ರೂ.5000/– ಜೊತೆಗೆ ಹೆಚ್ಚುವರಿಯಾಗಿ ರೂ.500/– ಪ್ರತಿದಿನದಂತೆ ದಂಡ ಹಾಕಲಾಗುವುದು. ಹಾಗೆಯೇ, ಈಜುಕೊಳದ ಮಾಲೀಕರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ ದಂಡ ವಸೂಲಿ ಮಾಡಲಾಗುವುದು.

ಸಾರ್ವಜನಿಕರು ಮೇಲ್ಕಂಡ ನಿಷೇಧಗಳನ್ನು ಯಾರಾದರು ಉಲ್ಲಂಘನೆ ಮಾಡುವುದು ಕಂಡುಬಂದಲ್ಲಿ ಕೂಡಲೇ ಮಂಡಳಿಯ ಕಾಲ್ ಸೆಂಟರ್ ಸಂಖ್ಯೆ : 1916 ಗೆ ತಿಳಿಸಬಹುದಾಗಿದೆ.

12/03/2024

ಅಧ್ಯಕ್ಷರು,
ಬೆಂಗಳೂರು ಜಲಮಂಡಳಿ